# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕ ಅಭಿಯಂತರರಕಛೇರಿ ವಾರ್ಡ್ ಸಂಖ್ಯೆ: 138 ಚಲವಾಧಿ ಪಾಳ್ಯ ಬೆಂಗಳೂರು

***************************************************************************

ಸಂಖ್ಯೆ: w-138/Committee/Proceding -25/2021-22 dt. 21-10-2021

## ಸಭೆಯ ನಡವಳಿಗಳು

ಸಮಿತಿಯ ಕಾರ್ಯದರ್ಶಿಗಳು ಸಭೆಯನ್ನು ನಡೆಸುತ್ತಾ ಸಭೆಯಲ್ಲಿ ಮಾನ್ಯ ನೋಡಲ್ ಆಧಿಕಾರಿಗಳ ಅನುಪಸ್ಥಿತಿಯಲ್ಲಿ ಉಪಸ್ಥಿತಗೊಂಡಿರುವ ಉನ್ನತ ಸಭೆಗೆ ಅಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತಕೋರಿದರು. ಹಾಗೂ ಸಭೆಯನ್ನು ಮುನ್ನಡೆಸಲಾಯಿತು

## ಸಭೆಯಲ್ಲಿಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಿ ಕೈಗೊಂಡ ನಿರ್ಣಗಳ ಅನುಷ್ಠನದ ಬಗ್ಗೆ ಸಭೆಯಲ್ಲಿ ಚರ್ಚಿಸಿ ಸಭೆಯನ್ನು ಪ್ರಾರಂಭಿಸಲಾಯಿತು.

ಕಮಿಟಿ ಸದಸ್ಯರು ವಾರ್ಡ್ 138ರ ವ್ಯಾಪ್ತಿಯಲ್ಲಿ ಬರುವ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಕಸ ಹಾಗೂ ಇತರೆ ತ್ಯಾಜ್ಯ ಹಾಕುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು

ಕಿರಿಯ ಆರೊಗ್ಯ ಪರೀವಿಷಕರನ್ನು ವಿಷಯದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಕಿರಿಯ ಆರೋಗ್ಯ ಪರಿವೀಕ್ಷಕರು ಸದರಿ ವಿಷಯವು ಗಮನಕ್ಕೆ ಬಂದಿದ್ದು ಸದರಿ ಸ್ಥಳಗಳಲ್ಲಿ ತ್ಯಾಜ್ಯ ಎಸೆಯುವವರ ಬಗ್ಗೆ ನಿಗವಹಿಸುವಂತೆ ಮಾರ್ಷಲ್‌ಗಳಿಗೆ ತಿಳಿಸಿ ಬಿ.ಬಿ.ಎಂ.ಪಿ ನಿಯಮನುಸಾರ ಕ್ರಮ ಕೈಗೊಳ್ಳ ಸಭೆಯಲ್ಲಿ ಹಾಜರಾಗಿದ್ದ ಮಾರ್ಷಲ್‌ಗಳಿಗೆ ಸೂಚಿಸಿದರು.

ಮಾನ್ಯ ಅಧ್ಯಕ್ಷರು ಕಂದಾಯ ಅಧಿಕಾರಿಗಳಿಗೆ ಮತದಾನದ ಗುರ್ತಿನ ಚೀಟಿ ವಿತರಿಸುವ ಮತ್ತು ಹೊಸ ಮತದಾರರ ಗುರ್ತಿನ ಚೀಟಿ ನೋಂದಣಿಯ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು

ಕಂದಾಯ ಅಧಿಕಾರಿಗಳು ಗುರ್ತಿನ ಚೀಟಿಯನ್ನು ಭೂತ್ ಮಟ್ಟಡದ ಏಜೆಂಟ್ ಗಳಿಂದ ವಿತರಿಸಲಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

_2

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ವಿವರ ಸಭೆಗೆ ನೀಡುವಂತೆ ಕೋರಿದರು ಹಾಗೂ ಅವಶ್ಯಕವಾಗಿ ನಡೆಯಬೇಕಾದ ಕಾಮಗಾರಿಗಳ ಬಗ್ಗೆ ವಿವರಣೆ ಕೋರಿದರು.

ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್‌ನಲ್ಲಿ ನಡೆಯುತ್ತಿರುವ ಕಾಮಗಾರಿಗಳ ವಿವರವನ್ನು ನೀಡಿದರು.

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳು ಕಂಡುಬಂದಿರುವ ಬಗ್ಗೆ ಸಭೆಯಲ್ಲಿ ಪ್ರಸ್ತಪಿಸಿದರು.ಈ ವಿಷಯದ ಬಗ್ಗೆ ಮಾನ್ಯ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಯಲ್ಲಿ ಗುಂಡಿಗಳನ್ನು ಮುಚ್ಚಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ಹಲವು ದಿನಗಳಿಂದ ಮಳೆಯ ಪ್ರಮಾಣದ ಹೆಚ್ಚಗಿದ್ದು ವಾರ್ಡ್ ವ್ಯಾಪ್ತಿಯಲ್ಲಿ ಕಟ್ಟಡ ಕುಸಿತ ಹಾಗೂ ಮಳೆ ಹಾನಿಯ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ಶೀಥಿಲಗೊಂಡ ಕಟ್ಟಡವಿರುವುದಿಲ್ಲ ಹಾಗೂ ಮಳೆಗಾಲದಲ್ಲಿ ರಾತ್ರಿ ಪಾಳಿಯಲ್ಲಿ ಕೆಲಸಗಾರರನ್ನು ಮತ್ತು ಟ್ರಾಕ್ಟರ್ ಉಪಯೋಗಿಸಿಕೊಂಡು ಕಾರ್ಯನಿರ್ವಹಿಸುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ಬಿಡಬ್ಲೂಎಸ್‌ಎಸ್‌ಬಿ ಕಛೇರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಂದ ಬಂದ ದೂರಿನ ಪುಸ್ತಕವನ್ನು ಪರಿಶೀಲಿಸಿದರು ಹಾಗೂ ಕೈಗೊಂಡ ಕ್ರಮಗಳ ವಿವರವನ್ನು ಕೋರಿದರು.

..3

ಬಿಡಬ್ಲೂಎಸ್‌ಎಸ್‌ಬಿ ಆಧಿಕಾರಿಗಳು ವಾರ್ಡ್ 138 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಮಾಡುವುದಾಗಿ ತಿಳಿಸಿದರು.

ಅಧ್ಯಕ್ಷರು ಬೆಸ್ಕಂ ಕಛೇರಿಗೆ ವಾರ್ಡ್ 138 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು.

ಬೆಸ್ಕಂ ಆಧಿಕಾರಿಯವರು ವಾರ್ಡ್ 138ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರುಗಳ ವಿವರ ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು.

ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಬಗ್ಗ ಸಭೆಯಲ್ಲಿ ವಿವರಣೆ ಮತ್ತು ಕೈಗೊಂಡಿರುವ ಕ್ರಮದ ಬಗ್ಗೆ ಸಭೆಯಲ್ಲಿ ವಿವರಣೆ ನೀಡಿದರು.

ಆರೋಗ್ಯ ಪರಿವೀಕ್ಷಕರು ವಾಡ್-138 ಮತ್ತು ಕಂದಾಯ ಪರಿವೀಕ್ಷರು ವಾರ್ಡ್-138 ರವರುಗಳಿಗೆ ಕೋವಿಡ್-19ಪೂರ್ಣ ಪ್ರಮಾಣದಲ್ಲಿ ತಗ್ಗಿದ್ದು ವಾರ್ಡ್ ನಲ್ಲಿ ಲಸಿಕೆ ಅಭಿಯಾನ ಕಾರ್ಯಕ್ರಮ ಉತ್ತಮ ರೀತಿಯಲ್ಲಿ ಸಾರ್ವಜನಕರು ಸ್ವಂಧಿಸುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು

ಅಧ್ಯಕ್ಷರು ವಾರ್ಡ್‌ನಲ್ಲಿ ಕಸ ವಿಲೇವಾರಿಯ ಬಗ್ಗೆ ಹಲವು ದೂರುಗಳ ಬಗ್ಗೆ ಸಭೆಯಲ್ಲಿ ಕೋರಿದರು ಹಾಗೂ ಜೆ.ಜೆ.ಆರ್ ನಗರ ಮುಖ್ಯರಸ್ತೆಯ ಬಿ.ಬಿ.ಎಂ.ಪಿ ಜಾಗದಲ್ಲಿ ತ್ಯಾಜ್ಯ ಸುರಿಯುತ್ತಿರುವ ಬಗ್ಗೆ ಸಭೆಯಲ್ಲಿ ಆರೋಗ್ಯ ಪರಿವೀಕ್ಷಕರನ್ನು ವಿವರಣೆ ಕೋರಿದರು ಹಾಗೂ ಗುತ್ತಿಗೆ ಕಾರ್ಮಿಕರು ಹಾಗೂ ಬಿ.ಬಿ.ಎಂ.ಪಿ ನೌಕರರ ಹಾಜರಾತಿ ಪುಸ್ತಕ ಮತ್ತು ಆಟೋಗಳ ಹಾಜರಾತಿಯ ಬಗ್ಗೆ ವಿವರಣೆ ಕೋರಿದರು.

ಕಿರಿಯ ಆರೋಗ್ಯ ಪರಿವೀಕ್ಷರು ನೌಕರರ ಹಾಜರಾತಿ ಪುಸ್ತಕ ಮತ್ತು ಆಟೋಗಳ ಹಾಜರಾತಿ ಪುಸ್ತಕವನ್ನು ಸಭೆಯಲ್ಲಿ ಮಂಡಿಸಿ ಕಸ ವಿಲೇವಾರಿಯು ಒಂದು ವಾರದಿಂದ ಹೆಚ್ಚಿನ ಪ್ರಮಾಣದಲ್ಲಿ ಕಸ ಉತ್ಪದನೆಯಾಗುತ್ತಿದ್ದು ಕಸ ವಿಲೇವಾರಿಯ ಘಟಕಗಳಲ್ಲಿ ಹೆಚ್ಚಿನ ಪ್ರಮಾಣದ ಕಂಪ್ಯಾಕ್ಟರ್‌ಗಳು ಕಸ ವಿಲೇವಾರಿಗೆ ಬರುತ್ತಿದ್ದು ಅಲ್ಪ ಪ್ರಮಾಣದ ಕಸ ವಿಲೇವಾರಿ ತೊಂದರೆಯಾಗಿರುವುದನ್ನು ಸಭೆಯಲ್ಲಿ ಮಂಡಿಸಿದರು.

ಮಾನ್ಯ ಅಧ್ಯಕ್ಷರು ಮಾರ್ಷಲ್‌ಗಳು ವಿಧಿಸಿದ ದಂಡದ ಬಗ್ಗೆ ವಿವರಣೆ ಕೋರಿದರು.

ವಾರ್ಡ್-138 ವಾರ್ಡ್‌ನ ಮರ್ಷಲ್ ವಾರ್ಡ್ ವ್ಯಾಪ್ತಿಯಲ್ಲಿ ಕಸ ಸುರಿಯುತ್ತಿರುವರನ್ನು ಹುಡುಕಿ ದಂಡ ವಿಧಿಸುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮಿತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | -------- | ಸಹಿ ------- |
|---|---|---|---|
| 1 | --- | | |
| 2 | ಶ್ರೀ ಗಿರಿಧರ್, ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 138, ಬಿ.ಬಿ.ಎಂ.ಪಿ, ದೂ. 8618436036 | ಸದಸ್ಯ ಕಾರ್ಯದರ್ಶಿ | [signature] |
| 3 | ಗೀತಾ ಹೆಚ್, ದೂ. 9986537126 ಕಿರಿಯ ಆರೋಗ್ಯ ಪರಿವೀಕ್ಷಕರು. ವಾರ್ಡ್ -138 | ಸದಸ್ಯರು | [signature] |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ ದೂ. 9342582372 ಶ್ರೀ ಬಾಬು (ಕೆಲಸ ಪರಿವೀಕ್ಷಕರು) | ಸದಸ್ಯರು | [signature] |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ ದೂ. 9845563157 | ಸದಸ್ಯರು | [signature] |
| 6 | ಶ್ರೀ ಮೊಹಮದ್ ಸಾಧೀಕ್ ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ನಂ. 9945373444 | ಸದಸ್ಯರು | [signature] |
| 7 | ಶ್ರೀ ಮುಸ್ತಕ್ ಶರೀಫ್ ದೂ. 9880960040 ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ | ಸದಸ್ಯರು | [signature] |
| 8 | ಶ್ರೀ ಶಿವಯ್ಯ (ಆರ್.ಐ) 9480685303 ಕಂದಾಯ ಪರಿವೀಕ್ಷಕರು | ಸದಸ್ಯರು | [signature] |

| | | | |
|---|---|---|---|
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ಪ್ರತಿನಿಧಿ ಗೀತಾ ಹೆಚ್, ದೂ. 9986537126 | ಸದಸ್ಯರು | |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ ( ಬಿಡಬ್ಲೂ.ಎಸ್.ಎಸ್.ಬಿ) ರವರ ಪ್ರತಿನಿಧಿ | ಸದಸ್ಯರು | 24/10/21 |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂಣತರರು . (ಬೇಸ್ಕಂ)ರವರ ಪ್ರತಿನಿಧಿ | ಸದಸ್ಯರು | |

ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 138
ವಾರ್ಡ್ ಹಂತದ ಸಮೀತಿ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 138

ಪ್ರತಿಯನ್ನು

1. ಜಂಟಿ ಆಯುಕ್ತರು ಪಶ್ಚಿಮ ರಚರ ಅವಗಾಹನೆಗೆ ಸಲ್ಲಿಸಿದೆ,
2. ಮುಖ್ಯ ಅಭಿಯಂತರರು ಪಶ್ಚಿಮ ರವರ ಮಾಹಿತಿಗೆ ಸಲ್ಲಿಸಿದೆ,
3. ಕಛೇರಿ ಕಡತಕ್ಕೆ